## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 147

ಸದಸ್ಯರ ಹೆಸರು : ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 13-09-2022

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕದಲ್ಲಿರುವ ರೈತ ಉತ್ಪಾದಕ ಸಂಘಗಳ ಸಂಖ್ಯೆಯೆಷ್ಟು; | ರಾಜ್ಯದಲ್ಲಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರಡಿ 12 ರೈತ ಉತ್ಪಾದಕ ಸಹಕಾರ ಸಂಘಗಳು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ, 1997 ರಡಿ 04 ರೈತ ಉತ್ಪಾದಕ ಸೌಹಾರ್ದ ಸಹಕಾರಿ ಸಂಸ್ಥೆಗಳು ಹಾಗೂ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, 1960 ರಡಿ 19 ರೈತ ಉತ್ಪಾದಕ ಸಂಘಗಳು ನೋಂದಣಿಯಾಗಿರುತ್ತವೆ.<br>ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ರಾಜ್ಯ ಮತ್ತು ಕೇಂದ್ರ ಸರ್ಕಾರದ ಯೋಜನೆಗಳಡಿ ವಿವಿಧ ಇಲಾಖೆಗಳು/ ಸಂಸ್ಥೆಗಳಿಂದ ಉತ್ತೇಜಿತ ಒಟ್ಟು 1139 ರೈತ ಉತ್ಪಾದಕರ ಸಂಸ್ಥೆಗಳಿವೆ. |
| ಆ) | 2020-21 ಮತ್ತು 2021-22 ನೇ ಸಾಲಿನಲ್ಲಿ ರಾಜ್ಯದ ಯೋಜನೆಯಡಿಯಲ್ಲಿ ರೈತ ಉತ್ಪಾದಕ ಸಂಘಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಬಿಡುಗಡೆಯಾಗಿರುವ ಹಣದಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ; | ಸಹಕಾರ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಪೈಕಿ ರೈತ ಉತ್ಪಾದಕ ಸಹಕಾರ ಸಂಘಗಳು, ರೈತ ಉತ್ಪಾದಕ ಸೌಹಾರ್ದ ಸಹಕಾರಿ ಸಂಸ್ಥೆಗಳು ಹಾಗೂ ರೈತ ಉತ್ಪಾದಕ ಸಂಘಗಳಿಗೆ ಅನುದಾನ ನೀಡುವ ಯಾವುದೇ ಯೋಜನೆಯನ್ನಾಗಲಿ, ಆಯವ್ಯಯ ಅವಕಾಶವನ್ನಾಗಲಿ ಕಲ್ಪಿಸಿರುವುದಿಲ್ಲ. ಆದ್ದರಿಂದ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.<br>ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ರಾಜ್ಯದ ಯೋಜನೆಗಳಡಿ 2020-21 ಮತ್ತು 2021-22 ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಮತ್ತು ವೆಚ್ಚದ ವಿವರಗಳು ಈ ಕೆಳಗಿನಂತೆ ಇರುತ್ತವೆ.<br>**(ರೂ. ಲಕ್ಷಗಳಲ್ಲಿ)** |

| ಕ್ರ.ಸಂ | ಆರ್ಥಿಕ ವರ್ಷ | ಬಿಡುಗಡೆಯಾದ ಅನುದಾನ | ಭರಿಸಿರುವ ವೆಚ್ಚ |
|---|---|---|---|
| 1 | 2020-21 | 710.89 | 616.44 |
| 2 | 2021-22 | 2743.66 | 2658.546 |
| | ಒಟ್ಟು | 3454.55 | 3274.986 |

| | | |
|---|---|---|
| ಇ) | ರೈತ ಉತ್ಪಾದಕರ ಸಂಘಗಳಲ್ಲಿ ಶೇಕಡ 90 ಕ್ಕಿಂತಲೂ ಹೆಚ್ಚು ರೈತ ಉತ್ಪಾದಕ ಸಂಘಗಳು 80 ಲಕ್ಷಗಳಿಗಿಂತ ಕಡಿಮೆ ಆದಾಯ ಗಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ 2018-2019 ರಲ್ಲಿ ಸರ್ಕಾರವು ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ-2018 ಅನ್ನು ಜಾರಿಗೆ ತಂದಿರುತ್ತದೆ. ರೈತ ಉತ್ಪಾದಕರ ಸಂಸ್ಥೆಗಳ ಬೆಳವಣಿಗೆಯು 3 ಹಂತಗಳಲ್ಲಿದ್ದು (ಪ್ರಾರಂಭ ಅಥವಾ ರಚನೆ ಹಂತ, ಬೆಳವಣಿಗೆ ಹಂತ ಮತ್ತು ವ್ಯಾಪಾರ ವಹಿವಾಟು ಹೆಚ್ಚಿಸುವ ಹಂತ) ಇವುಗಳು ವ್ಯಾಪಾರ ವಹಿವಾಟು ಹೆಚ್ಚಿಸುವ ಹಂತ ತಲುಪಲು 2-3 ವರ್ಷಗಳ ಅವಶ್ಯಕತೆ ಇರುತ್ತದೆ.<br><br>2020-21 ನೇ ಸಾಲಿನಿಂದ ರಚಿಸಿದ ರಾಜ್ಯದ ಹೆಚ್ಚಿನ ರೈತ ಉತ್ಪಾದಕರ ಸಂಸ್ಥೆಗಳು ರಚನೆ ಮತ್ತು ಬೆಳವಣಿಗೆ ಹಂತದಲ್ಲಿದ್ದು, ವ್ಯವಹಾರ ಅಭಿವೃದ್ಧಿಯು ಪ್ರಾರಂಭಿಕ ಹಂತದಲ್ಲಿರುತ್ತವೆ. 2021-22 ನೇ ಸಾಲಿನಲ್ಲಿ ರಚಿಸಿರುವ ರೈತ ಉತ್ಪಾದಕರ ಸಂಸ್ಥೆಗಳು ಪ್ರಾರಂಭದ ಹಂತದಲ್ಲಿರುತ್ತವೆ.<br><br>ರೈತ ಉತ್ಪಾದಕರ ಸಂಸ್ಥೆಗಳ ಸಾಮರ್ಥ್ಯ ಬಲವರ್ಧನೆಗಾಗಿ ಉತ್ಪಾದನಾ ತಂತ್ರಜ್ಞಾನ, ಮಾರುಕಟ್ಟೆ, ಸಂಸ್ಕರಣೆ, ಮೌಲ್ಯವರ್ಧನೆ ಹಾಗೂ ರಫ್ತು ಕುರಿತಂತೆ ರೈತ ಉತ್ಪಾದಕರ ಸಂಸ್ಥೆಗಳ ಉತ್ಕೃಷ್ಟತಾ ಕೇಂದ್ರ, ಕೆಪೆಕ್, ಅಪೆಡಾ, ವಿಟಿಪಿಸಿ, ಕೃಷಿ ವಿಜ್ಞಾನ ಕೇಂದ್ರಗಳು ಸೇರಿದಂತೆ ಇತರೆ ಸಂಸ್ಥೆಗಳಿಂದ ತರಬೇತಿ ನೀಡಲಾಗುತ್ತದೆ. |
| ಈ) | ರೈತ ಉತ್ಪಾದಕರ ಸಂಘಗಳ ಸಂಸ್ಕರಣಾ ಸಾಮರ್ಥ್ಯವು ತುಂಬಾ ಸೀಮಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಹಕಾರ ಇಲಾಖೆ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಪೈಕಿ ರೈತ ಉತ್ಪಾದಕ ಸಹಕಾರ ಸಂಘಗಳು, ರೈತ ಉತ್ಪಾದಕ ಸೌಹಾರ್ದ ಸಹಕಾರಿ ಸಂಸ್ಥೆಗಳು ಹಾಗೂ ರೈತ ಉತ್ಪಾದಕ ಸಂಘಗಳಿಗೆ ಅನುದಾನ ನೀಡುವ ಯಾವುದೇ ಯೋಜನೆಯನ್ನಾಗಲಿ, ಆಯವ್ಯಯ ಅವಕಾಶವನ್ನಾಗಲಿ ಕಲ್ಪಿಸಿರುವುದಿಲ್ಲ. ಆದ್ದರಿಂದ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. |
| ಉ) | ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದು ಕೊಂಡ ಕ್ರಮಗಳೇನು? | ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ರೈತ ಉತ್ಪಾದಕರ ಸಂಸ್ಥೆಗಳ ಸಂಸ್ಕರಣಾ ಸಾಮರ್ಥ್ಯವನ್ನು ಬಲವರ್ಧಿಸಲು ಪ್ರಧಾನ ಮಂತ್ರಿಗಳ ಕಿರು ಆಹಾರ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (PMFME) ಯೋಜನೆಯಡಿ ಕೇಂದ್ರ ಸರ್ಕಾರದಿಂದ ಶೇ. 35 ರಷ್ಟು ಸಹಾಯಧನ ನೀಡುತ್ತಿದೆ. ಕರ್ನಾಟಕ ರಾಜ್ಯ ಸರ್ಕಾರವು ಕೇಂದ್ರದ ಪಾಲಿನ ಸಹಾಯದ ಜೊತೆಗೆ ಹೆಚ್ಚುವರಿಯಾಗಿ ಶೇ. 15 ರಷ್ಟು ಸಹಾಯಧನ ನೀಡುತ್ತಿದೆ. ಒಟ್ಟಾರೆ ಸದರಿ ಯೋಜನೆಯಡಿ ಗರಿಷ್ಠ 15 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. ಇದಲ್ಲದೆ ರಾಜ್ಯ ಯೋಜನೆಯಡಿ ರಚಿಸಿರುವ ರೈತ ಉತ್ಪಾದಕರ ಸಂಸ್ಥೆಗಳ ಮೂಲಭೂತ ಸೌಕರ್ಯ ಮತ್ತು ವ್ಯವಹಾರ ಅಭಿವೃದ್ಧಿಗೆ ರೂ.10 ಲಕ್ಷಗಳ ಸಹಾಯಧನ ನೀಡಲಾಗುತ್ತಿದೆ. ಸದರಿ ಅನುದಾನವನ್ನು ಸಹ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಬಳಸಬಹುದಾಗಿದೆ. |

**ಸಂಖ್ಯೆ:** AGRI-AML/203/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು